# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ಘಟಕ (ಬಿ.ಸಿ.ಎಂ.)

ಸಂಖ್ಯೆ.ಕುವಿ/ಬಿ.ಸಿ.ಎಂ-01/ 1359 /2023-24 ದಿನಾಂಕ:06-07-2023

**ಪ್ರಕಟಣೆ**

ವಿಷಯ: 2022-23ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ: ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು - ಇವರ ಪತ್ರ ಸಂಖ್ಯೆ:E914550 BCWD-17012/22/2022-BCWD_ SCHLR-BCWD /ದಿನಾಂಕ:05-07-2023.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಶೈಕ್ಷಣಿಕ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ / ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ವಿದ್ಯಾರ್ಥಿವೇತನ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕವನ್ನು 28-02-2023ಕ್ಕೆ ನಿಗಧಿಪಡಿಸಲಾಗಿತ್ತು. ಸದರಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ:06-07-2023 ರಿಂದ 15-07-2023 ರವರೆಗೆ 10 ದಿನಗಳ ಕಾಲ ವಿಸ್ತರಿಸಲಾಗಿದೆ.**

ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಸ್ನಾತಕ/ ಸ್ನಾತಕೋತ್ತರ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವಿಸ್ತರಿಸಿರುವ ಅವಕಾಶವನ್ನು ಸದುಪಯೋಗಪಡಿಸಿಕೊಂಡು ನಿಗಧಿತ ದಿನಾಂಕದೊಳಗಾಗಿ ಅರ್ಜಿಗಳನ್ನು ಸಲ್ಲಿಸುವುದು. ಸದರಿ ವಿಷಯವನ್ನು ವಿಭಾಗದ ಅಧ್ಯಕ್ಷರು / ನಿರ್ದೇಶಕರು / ಸಂಯೋಜನಾಧಿಕಾರಿಗಳು ಹಾಗೂ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು ಖುದ್ದು ಗಮನ ಹರಿಸಿ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ವ್ಯಾಪಕ ಪ್ರಚಾರದ ಮೂಲಕ ಪ್ರೋತ್ಸಾಹಿಸಬೇಕಾಗಿ ಕೋರಲಾಗಿದೆ. ಒಂದು ವೇಳೆ ನಿಗಧಿತ ಅವಧಿಯೊಳಗಾಗಿ ಅರ್ಜಿ ಸಲ್ಲಿಸದಿದ್ದಲ್ಲಿ ಉಂಟಾಗುವ ನ್ಯೂನ್ಯತೆಗಳಿಗೆ ವಿಶ್ವವಿದ್ಯಾಲಯ / ಒ.ಬಿ.ಸಿ. ಘಟಕದ ಎಸ್.ಎಸ್.ಪಿ. ನೋಡಲ್ ಅಧಿಕಾರಿಗಳು ಹೊಣೆಗಾರಿಕೆ ಇರುವುದಿಲ್ಲ ಎಂಬ ಅಂಶವನ್ನು ವಿದ್ಯಾರ್ಥಿಗಳ ಗಮನಕ್ಕೆ ತರಲು ತಿಳಿಸಲಾಗಿದೆ.

ಕುಲಸಚಿವರು
ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ,
ಶಂಕರಘಟ್ಟ-577451

ಗೆ,

1) ಅಧ್ಯಕ್ಷರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ / ಶಿವಮೊಗ್ಗ - ತಮ್ಮ ವಿಭಾಗದ ವಿದ್ಯಾರ್ಥಿಗಳು ಸಂಶೋಧನಾರ್ಥಿಗಳ ಗಮನಕ್ಕೆ ತರಲು ಕೋರಿದೆ.
2) ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ ಬಿ.ಹೆಚ್. ರಸ್ತೆ, ಕಡೂರು.
3) ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ. ಕಾಲೇಜು ಆವರಣ, ಜ್ಯೋತಿನಗರ ಚಿಕ್ಕಮಗಳೂರು.
4) ಪ್ರಾಂಶುಪಾಲರುಗಳು, ಕುವೆಂಪು ವಿಶ್ವವಿದ್ಯಾಲಯ ಎಲ್ಲಾ ಸಂಯೋಜಿತ ಕಾಲೇಜುಗಳು.
5) ನಿರ್ದೇಶಕರು, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ - ವಿಶ್ವವಿದ್ಯಾಲಯದ ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಿದೆ.
5) ಕಛೇರಿ ಪ್ರತಿ.